# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಖ.ಕೋ:115:2024-25/ 2772 ದಿನಾಂಕ:23.12.2024

## ದರಪಟ್ಟಿ ಆಹ್ವಾನ

ವಿಷಯ: ವಿಶ್ವವಿದ್ಯಾನಿಲಯದ Career Advancement Scheme Tool Development ತಂತ್ರಾಂಶವನ್ನು ಅಳವಡಿಸಲು ನುರಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ:
1. ಡಾ. ರಮೇಶ್ ಬಿ., ನಿರ್ದೇಶಕರು, IQAC ಇವರ ಮನವಿ ಪತ್ರ ದಿನಾಂಕ:25.11.2024
2. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/9035 ದಿನಾಂಕ: 09.09.2022
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 20.12.2024

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಬೇಡಿಕೆಯನುಸಾರ ಉಲ್ಲೇಖ(2)ರ ಆದೇಶದ ಮೇರೆಗೆ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ತಿದ್ದುಪಡಿ 4(i)(ii)ರ ನಿಯಮದನ್ವಯ ವಿಶ್ವವಿದ್ಯಾನಿಲಯ **Career Advancement Scheme Tool Development ತಂತ್ರಾಂಶವನ್ನು ಅಳವಡಿಸಲು ನುರಿತ ಸಂಸ್ಥೆಗಳಿಂದ** ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ನೋಂದಾಯಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| Sl.No | Service | Price in Rs. | GST (18%) in Rs. | Total Price (inclusive of tax) in Rs. |
|---|---|---|---|---|
| 1. | **Web Application Development for CAREER ADVANCEMENT SCHEME (Automation) as per requirement Specifications**<br><br>**Technologies used for this tool**<br><br>Front end tool such as HTML5,CSS3 Open SourceJSPlatformlike jQuery,ReactJS Server-side software such as PHP, MySQL(Database)with XAMPP Web server software such as Opereating System:Windows NT Latest version Webserver:<br>Apache elates version | | | |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ವಿಶ್ವವಿದ್ಯಾನಿಲಯದ Career Advancement Scheme Tool Development ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲು ನುರಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಕುರಿತ ದರಪಟ್ಟಿ"** ಎಂದು ನಮೂದಿಸತಕ್ಕದ್ದು.
2. **ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103,** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 03.01.2025 ಅಪರಾಹ್ನ 3.30 ಗಂಟೆ.**
4. ತಂತ್ರಾಂಶದ ಅಳವಡಿಕೆಗೆ ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
5. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಇತರೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.
6. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
7. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.

(ಪು.ತಿ.ನೋ)

8. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
9. ತಂತ್ರಾಂಶವು ಸರಿಯಾಗಿ ಕಾರ್ಯನಿರ್ವಹಿಸದೇ ಇದ್ದಲ್ಲಿ ಯಾವುದೇ ಕಾರಣ ನೀಡದೇ ಹುಂಡಿಯನ್ನು ಅಂಗೀಕರಿಸುವ ಮತ್ತು ತಿರಸ್ಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ಒಂದು ವರ್ಷದ ಅವಧಿಯವರೆಗೆ ತಂತ್ರಾಂಶದಲ್ಲಿ ಏನಾದರೂ ಸಮಸ್ಯೆಗಳು ಕಂಡುಬಂದಲ್ಲಿ ಯಾವುದೇ ಸೇವಾ/ಇತರೆ ಶುಲ್ಕವನ್ನು ವಿಧಿಸದೇ ತಾವೇ ತಮ್ಮ ಸಂಸ್ಥೆಯ ವತಿಯಿಂದ ಸ್ವಂತ ಖರ್ಚಿನಲ್ಲಿ ನಿರ್ವಹಣೆ ಮಾಡಿಕೊಡುವುದು.
11. ತಮ್ಮ ಸಂಸ್ಥೆಯಿಂದ ಅಳವಡಿಸಲು ಉದ್ದೇಶಿಸಿರುವ ತಂತ್ರಾಂಶದ ಸಂರಚನೆಯಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಯ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
12. **ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಗಳಲ್ಲಿ ಅತೀ ಕಡಿಮೆ ದರಗಳನ್ನು ನಮೂದಿಸಿರುವ ಸಂಸ್ಥೆಯನ್ನು ವಿಶ್ವವಿದ್ಯಾನಿಲಯವು ಪರಿಗಣಿಸಲಾಗುವುದು.**
13. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
14. ಕಾರ್ಯಾದೇಶ ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
15. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ **ನಿರ್ದೇಶಕರು,(IQAC), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.**

**ಆದೇಶದ ಮೇರೆಗೆ**

**ಉಪಕುಲಸಚಿವರು**

**ಪ್ರತಿಗಳು:**

1. ಡಾ. ರಮೇಶ್ ಬಿ., ನಿರ್ದೇಶಕರು, IQAC, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ಕಚೇರಿ ಪ್ರತಿ.